ಶ್ರೀ ಧರ್ಮಸಿಂಗ್.—ಮಾನ್ಯ ಅಧ್ಯಕ್ಷರೇ, ಹಕ್ಕುಭಾದ್ಯತಾ ಸಮಿತಿಯು ೫ ಜನರನ್ನು ಒಳಗೊಂಡ ವರದಿಯನ್ನು ಮಾನ್ಯ ಹೆಚ್. ಟಿ. ಕೃಷ್ಣಪ್ಪನವರ ಪರವಾಗಿ ಸಭೆಗೆ ಒಪ್ಪಿಸುತ್ತಿದ್ದೇನೆ.

ಅಧ್ಯಕ್ಷರು.—ವರದಿ ಒಪ್ಪಿಸಲಾಯಿತು

ಅರ್ಜಿಗಳನ್ನೊಪ್ಪಿಸುವುದು

ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್.—ಅಧ್ಯಕ್ಷರೇ. ಈ ಕೆಳಕಂಡ ಅರ್ಜಿಗಳನ್ನು ಸಭೆಗೆ ಒಪ್ಪಿಸುತ್ತಿದ್ದೇನೆ.

೧. ದುರುದುಂಡೇಶ್ವರ ವಿದ್ಯಾವರ್ಧಕ ಸಂಘ, ಸಂಕೇಶ್ವರಕ್ಕೆ ಬಿ.ಎಡ್. ಕಾಲೇಜು ಮಂಜೂರು ಮಾಡುವ ಬಗ್ಗೆ.

೨. ಮಂಡಲ ಪಂಚಾಯತಿಯ ಠರಾವಿನ ವಿಷಯದಲ್ಲಿ ರಾಜಕೀಯ ಒತ್ತಡದಿಂದ ಸಮೂಹ ಮನೆಗಳ ಯಾದಿಯಲ್ಲಿ ಬದಲಾವಣೆಯಾಗಿದ್ದು ಇದನ್ನು ಸಂಪೂರ್ಣ ಚೌಕಾಶಿ ಹಾಗೂ ನ್ಯಾಯ ದೊರಕಿಸಿಕೊಡುವ ಬಗ್ಗೆ.

೩. ದುರುದುಂಡೇಶ್ವರ ವಿದ್ಯಾ ಸಂವರ್ಧಕ ಸಂಘ ಸಂಕೇಶ್ವರಕ್ಕೆ ಹೊಸ ಫಾರ್ಮಸಿ ಕಾಲೇಜನ್ನು ಆರಂಭಿಸಲು ಸರ್ಕಾರದಿಂದ ಮಂಜೂರು ಮಾಡುವ ಬಗ್ಗೆ.

ಚುನಾವಣಾ ಪ್ರಸ್ತಾವಗಳು

ಪ್ರೊ. ಎ. ಲಕ್ಷ್ಮೀಸಾಗರ್ (ಶಾಸನ ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೇ, ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಈ ಕೆಳಕಂಡ ಚುನಾವಣಾ ಪ್ರಸ್ತಾವಗಳನ್ನು ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅ. ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ ೨೬೫(೧)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಹನ್ನೆರಡು ಜನ ಸದಸ್ಯರನ್ನು ಚುನಾಯಿಸುವುದು.

ಆ. ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ ೨೬೮(೧)ನೇ ನಿಯಮದ ಅನುಸಾರವಾಗಿ ಈ ಸಭೆ ಅಂದಾಜು ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸುವುದು,

ಇ. ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ ೨೭೧(೧)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ ಒಂಬತ್ತು ಜನ ಸದಸ್ಯರನ್ನು ಚುನಾಯಿಸುವುದು.

ಈ. ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ ೨೭೨(೧)ನೇ ನಿಯಮದ ಅನುಸಾರವಾಗಿ ಈ ಸಭೆ ಹಕ್ಕುಬಾಧ್ಯತಾ ಸಮಿತಿಗೆ ಏಳು ಜನ ಸದಸ್ಯರನ್ನು ಚುನಾಯಿಸುವುದು.

ಉ. ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ ೨೭೬(೧)ನೇ ನಿಯಮದ ಅನುಸಾರವಾಗಿ ಈ ಸಭೆ ಅಧೀನ ಶಾಸನ ರಚನಾ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸುವುದು.

ಊ. ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ ೨೮೨(೧)ನೇ ನಿಯಮದ ಅನುಸಾರವಾಗಿ ಈ ಸಭೆ ಸರ್ಕಾರಿ ಭರವಸೆಗಳ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸುವುದು.

ಋ. ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳ ೨೮೩(೧)ನೇ ನಿಯಮದ ಮೇರೆಗೆ ಈ ಸಭೆ ಖಾಸಗಿ ಸದಸ್ಯರ ವಿಧೇಯಕಗಳು ಹಾಗೂ ನಿರ್ಣಯಗಳ ಸಮಿತಿಗೆ ಹತ್ತು ಜನ ಸದಸ್ಯರನ್ನು ಚುನಾಯಿಸುವುದು.